**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ 260/2013** **CW**-4 **PW**-2

**ಸಾಕ್ಷಿಯನ್ನು ದಿಃ 06.05.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಕುಮಾರ |
| ತಂದೆಯ ಹೆಸರುಃ | ಕೆಂಪೇಗೌಡ |
| ವಯಸ್ಸುಃ | 63 ವರ್ಷ |
| ವೃತ್ತಿಃ | ವ್ಯವಸಾಯ |
| ವಾಸ ಸ್ಥಳಃ | ಜನಿವಾರ ಗ್ರಾಮ |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಚಾಸಾ-1 ರಿಂದ ಚಾಸಾ-3 ಗೊತ್ತು.

ನವೆಂಬರ್ 2012 ರ ಬೆಳಗ್ಗೆ 9.00 ಗಂಟೆ ಸಮಯದಲ್ಲಿ ನಾನು ಚನ್ನರಾಯಪಟ್ಟಕ್ಕೆ ನಮ್ಮ ಊರಿನ ಗೇಟಿ ಬಳಿ ಬಂದಾಗ ಚಾಸಾ-1 ರವರು ಅವರ ಮನೆಯ ಬಳಿ ಕೆಳಕ್ಕೆ ಬಿದಿದ್ದು, ಎಡತಲೆಯ ಹಿಂಭಾಗಕ್ಕೆ ಪೆಟ್ಟು ಬಿದ್ದಿದ್ದು ರಕ್ತ ಬರುತ್ತಿತ್ತು. ನಂತರ ಅವರನ್ನು ಆಟೋದಲ್ಲಿ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇನೆ. ಅಷ್ಟರಲ್ಲಿ ಅವರ ಮಗ ಬಂದಿದ್ದು ಹೆಚ್ಚಿನ ಚಿಕಿತ್ಸೆಗೆ ಹಾಸನದ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ.

ಮರುದಿನ ನಾನು ಪೋಲೀಸರಿಗೆ ಹೇಳಿಕೆ ನೀಡಿರುತ್ತೇನೆ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀಮತಿ ಎಮ್ ಎಮ್ ಎಸ್ ರವರಿಂದ ಃ**

ಗಲಾಟೆ ಬಗ್ಗೆ ನನಗೆ ವಯ್ಯಕ್ತಿಕ ಮಾಹಿತಿ ಇಲ್ಲ ಎಂದರೆ ಸರಿ. ಗಲಾಟೆ ಆದ ನಂತರ ನಾನು ಸ್ಥಳಕ್ಕೆ ಬಂದಿರುತ್ತೇನೆ ಎಂದರೆ ಸರಿ. ನಾನು ಚಾಸಾ-1 ರವರನ್ನು ಆಸ್ಪತ್ರೆಗೆ

ಕರೆದುಕೊಂಡು ಹೋಗಿಲ್ಲ ಎಂದರೆ ಸರಿಯಲ್ಲ. ನನ್ನ ಹೇಳಿಕೆಯಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ ಎಂದರೆ ಸರಿ.

**ಮರು ವಿಚಾರಣೆಃ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).**

**ಓ ಹೇ ಕೇ ಸರಿ ಇದೆ.**

**(ಕುಸುಮ ವಿ.)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.**